## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 931 |
| 2 | ಸದಸ್ಯರ ಹೆಸರು | : | ಡಾ॥ ಕೆ. ಗೋವಿಂದ ರಾಜ್(ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 24.02.2022 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಪಿ.ಎಸ್.ಐ-ಸಿವಿಲ್) 545 ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿರುವುದಾಗಿ ಹಲವು ಅಭ್ಯರ್ಥಿಗಳು ದೂರು ನೀಡಿದ ಮೇರೆಗೆ ನೇಮಕಾತಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಪಿಎಸ್‌ಐ-ಸಿವಿಲ್) 545 ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ಅಕ್ರಮ ನಡೆದಿರುವುದಿಲ್ಲ. ಬದಲಾಗಿ ಕಲ್ಯಾಣ-ಕರ್ನಾಟಕ ಪ್ರದೇಶದ ಕೆಲವು ಅಭ್ಯರ್ಥಿಗಳು ಹಾಗೂ ಇನ್ನಿತರರು ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ / ಮನವಿಗಳನ್ನು ಸಲ್ಲಿಸಿರುವುದರಿಂದ ಸದರಿ ಮನವಿ /ಆಕ್ಷೇಪಣೆಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲು ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿರುತ್ತದೆ. |
| (ಆ) | ಯಾವ ಅಕ್ರಮಗಳು ನಿರ್ದಿಷ್ಟವಾಗಿ ನಡೆದಿವೆ; (ಮಾಹಿತಿ ಒದಗಿಸುವುದು) | ಅನ್ವಯಿಸುವುದಿಲ್ಲ. |
| (ಇ) | ಈ ದೂರಿನ ಬಗ್ಗೆ ಏನು ಕ್ರಮ ತೆಗೆದುಕೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು) | ಅನ್ವಯಿಸುವುದಿಲ್ಲ. |
| (ಈ) | ಯಾವ ಅಭ್ಯರ್ಥಿಗಳಿಗೂ ಅನ್ಯಾಯವಾಗದಂತೆ ನ್ಯಾಯಯುತವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು) | ನೇಮಕಾತಿ ಪ್ರಕ್ರಿಯೆಯಲ್ಲಿ ಅಳವಡಿಕೊಳ್ಳಲಾಗಿರುವ ನಿಯಮಗಳನ್ನು ಪರಿಶೀಲಿಸುವ ಸಲುವಾಗಿ ಸರ್ಕಾರದ ಆದೇಶ ಸಂಖ್ಯೆ: ಒಇ 21 ಪಿಇಐ 2022, ದಿನಾಂಕ: 15.02.2022ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು 545 ಪಿ.ಎಸ್.ಐ ಹುದ್ದೆಯ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿಆಸು ಇಲಾಖೆಯು ಕಾಲಕಾಲಕ್ಕೆ ಹೊರಡಿಸಿರುವ ಸುತ್ತೋಲೆಗಳನ್ವಯ ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗಿದೆಯೇ? ಎಂಬ ಬಗ್ಗೆ ವರದಿ ಸಲ್ಲಿಸಲು ಸೂಚಿಸಲಾಗಿದೆ. |

ಸಂಖ್ಯೆ: ಒಇ 30 ಪಿಇಐ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು